ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	455 (420)
ಮಾನ್ಯ ಸದಸ್ಯರ ಹೆಸರು	ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	09.03.2020
ಉತ್ತರಿಸುವ ಸಚಿವರು	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ	ಜಿಲ್ಲೆಯಲ್ಲಿ ಒಟ್ಟು ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು / ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು)	ಉತ್ತರ ಕನ್ನಡ ಜಿಲ್ಲೆಯಲ್ಲಿ ಒಟ್ಟು 10 ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿವೆ. ತಾಲ್ಲೂಕುವಾರು ಮಾಹಿತಿ ಈ ಕೆಳಕಂಡಂತಿದೆ:- 1. ಅಂಕೋಲಾ, 2. ಭಟ್ಕಳ, 3. ಹಳಿಯಾಳ, 4. ಹೊನ್ನಾವರ, 5. ಕುಮುಟಾ, 6. ಮುಂಡಗೋಡ, 7. ಸಿದ್ದಾಪುರ, 8. ಶಿರಸಿ, 9. ಜೋಯಿಡಾ, 10. ಯಲ್ಲಾಪುರ
ಆ	ಸರ್ಕಾರಿ ಆಸ್ಪತ್ರೆಗಳಲ್ಲಿ ಅಥವಾ ಗ್ರಾಮೀಣ ಆಸ್ಪತ್ರೆಗಳಲ್ಲಿ ವೈದ್ಯರು ಕೆಲಸ ಮಾಡಲು ಹಿಂದೇಟು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಅವರ ವಿರುದ್ಧ ಯಾವ ಕ್ರಮಗಳನ್ನು ಕೈಗೊಂಡಿದೆ.	ಬಂದಿದೆ ಸರ್ಕಾರಿ ಸೇವೆಗೆ ನೇಮಕಾತಿ ಹೊಂದಿದ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಕಡ್ಡಾಯವಾಗಿ 6 ವರ್ಷ ಗ್ರಾಮೀಣ ಪ್ರದೇಶದಲ್ಲಿ ಕರ್ತವ್ಯ ನಿರ್ವಹಿಸಬೇಕು. ತಪ್ಪಿದ್ದಲ್ಲಿ ಅವರ ವಿರುದ್ಧ ಸಕ್ಷಮ ಪ್ರಾಧಿಕಾರವಾದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಕ್ತರಿಂದ ಕೆ.ಸಿ.ಎಸ್ (ಸಿ.ಸಿ.ಎ) ನಿಯಮದ ಪ್ರಕಾರ ಶಿಸ್ತು ಕ್ರಮ ಜರುಗಿಸಲಾಗುತ್ತದೆ.

ಇ	ಕೆಲವೊಂದು ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳು ರೋಗಿಗಳಿಗೆ ಸೂಕ್ತವಾಗಿ ಸ್ಪಂದಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;	ಬಂದಿದೆ ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳು ರೋಗಿಗಳಿಗೆ ಸೂಕ್ತವಾಗಿ ಸ್ಪಂದಿಸುತ್ತಿಲ್ಲ ಎಂಬ ದೂರುಗಳ ಬಗ್ಗೆ ಸಂಬಂಧಪಟ್ಟ ನಿಯಂತ್ರಣಾಧಿಕಾರಿಗಳು ಕೆ.ಸಿ.ಎಸ್ (ಸಿ.ಸಿ.ಎ) ನಿಯಮದ ಪ್ರಕಾರ ಶಿಸ್ತು ಕ್ರಮ ಜರುಗಿಸಲಾಗುತ್ತದೆ.
ಈ	ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ನಿರ್ಲಕ್ಷ್ಯ ತೋರಿಸುತ್ತಿರುವುದರಿಂದ ಅಲ್ಲಿನ ನರ್ಸ್‌ಗಳೇ ವೈದ್ಯರಂತೆ ಚಿಕಿತ್ಸೆ ನೀಡುತ್ತಿದ್ದು, ಇದರಿಂದಾಗಿ ರೋಗಿಗಳ ಮೇಲೆ ಅಡ್ಡಪರಿಣಾಮಗಳು ಬೀರುವ ಸಾಧ್ಯತೆಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಈ ರೀತಿಯ ದೂರುಗಳು ಬಂದಿರುವುದಿಲ್ಲ

ಸಂ: ಆಕುಕ 04 ಪಿಹೆಚ್ ಎಸ್ ಡಿ 2020

[ಬಿ. ಶ್ರೀರಾಮುಲು]
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.